# ಕೋಲಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ

**ಅಧಿಸೂಚನೆ ಸಂಖ್ಯೆ ಃ ಎಡಿಎಂ 02/2019 ದಿನಾಂಕಃ09.01.2019.**

**ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಆರಂಭವಾಗುವ ದಿನಾಂಕ ಃ18.01.2019**

**ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಃ16.02.2019**

**ಸಮಯಃ ರಾತ್ರಿ 11ಃ59 ಗಂಟೆಯವರೆಗೆ ಮಾತ್ರ**

**ಬ್ಯಾಂಕ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕ ಃ18.02.2019**

| | | |
|---|---|---|
| **ವಿಷಯ ಃ** | | **ಶೀಘ್ರಲಿಪಿಗಾರ, ಬೆರಳಚ್ಚುಗಾರ, ಹಾಗೂ ಸೇವಕರ ಹುದ್ದೆಗಳ ನೇಮಕಾತಿ ಬಗ್ಗೆ.** |
| **ಉಲ್ಲೇಖಃ** | **1** | **ಸರ್ಕಾರಿ ಅಧಿಸೂಚನೆ ಸಂಖ್ಯೆ ಎಲ್‌ಎಡಬ್ಲ್ಯೂ 137 ಃ ಎಲ್‌ಸಿಇ 2014, ದಿನಾಂಕ 28.03.2016** |
| | **2.** | **ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ರವರ ಪತ್ರ ಸಂಖ್ಯೆ ಡಿ.ಓ. ಎಲ್‌ಸಿಎ II 128/2012 ದಿನಾಂಕ 07.12.2018.** |

ಸೂಚನೆಃ ಸದರಿ ಹುದ್ದೆಗಳಿಗೆ ನ್ಯಾಯಾಲಯಗಳ ಕಾರ್ಯಾಚರಣೆ ಆರಂಭಗೊಂಡ ನಂತರ/ನ್ಯಾಯಾಧೀಶರು ನೇಮಕಗೊಂಡ ನಂತರ , ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಮಾತ್ರ ನೇಮಕಾತಿ ಆದೇಶವನ್ನು ನೀಡಲಾಗುವುದು.

❄--❖--❖--❄

**ಕೋಲಾರ ಜಿಲ್ಲೆ, ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಶೀಘ್ರಲಿಪಿಗಾರ, ಬೆರಳಚ್ಚುಗಾರ, ಹಾಗೂ ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**ಅರ್ಜಿಗಳನ್ನು ಕೋಲಾರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್**

**http://karnatakajudiciary.kar.nic.in/districtrecruitment.asp**

**or http://districts.ecourts.gov.in/kolar**

**ಮೂಲಕ ಸಲ್ಲಿಸತಕ್ಕದ್ದು.**

1. <u>ಶೀಘ್ರಲಿಪಿಗಾರರು ಃ ಖಾಲಿ ಇರುವ ಹುದ್ದೆಗಳು – 03.</u>

ವೇತನ ಶ್ರೇಣಿ **14550–350–15600–400–17200–450–19000–500–21000–600–24600–700–26700.**

## ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಮಹಿಳೆ | ಗ್ರಾಮೀಣ | ಒಟ್ಟು ಹುದ್ದೆಗಳು |
|---|---|---|---|
| ಪ್ರವರ್ಗ - 2 (ಎ) | 01 | - | 01 |
| ಪ್ರವರ್ಗ – 3 (ಎ) | 01 | - | 01 |
| ಸಾಮಾನ್ಯ | - | 01 | 01 |
| ಒಟ್ಟು | 02 | 01 | 03 |

<u>ಶೀಘ್ರಲಿಪಿಗಾರರಿಗೆ ವಿದ್ಯಾರ್ಹತೆ ಃ</u> ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

<u>ಆಯ್ಕೆಯ ವಿಧಾನ</u> ಃ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

<u>ಟಿಪ್ಪಣಿಃ</u> ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು ಶೇಕಡ 5 ಅಂಕಗಳನ್ನೊಳಗೊಂಡಿರುತ್ತದೆ.

2. <u>ಬೆರಳಚ್ಚುಗಾರರು ಃ ಖಾಲಿ ಇರುವ ಹುದ್ದೆಗಳು – 03.</u>

ವೇತನ ಶ್ರೇಣಿ **11600–200–12000–250–13000–300–14200–350–15600–400–17200–450–19000–500–21000.**

## ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಗ್ರಾಮೀಣ | ಅಂಗವಿಕಲ ಅಭ್ಯರ್ಥಿ | ಒಟ್ಟು ಹುದ್ದೆಗಳು |
|---|---|---|---|
| ಪ್ರವರ್ಗ - 2 (ಎ) | 01 | - | 01 |
| ಪ್ರವರ್ಗ - 2 (ಬಿ) | - | 01 | 01 |
| ಸಾಮಾನ್ಯ | 01 | - | 01 |
| ಒಟ್ಟು | 02 | 01 | 03 |

ಬೆರಳಚ್ಚುಗಾರರಿಗೆ ವಿದ್ಯಾರ್ಹತೆ ಃ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ ಃ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿಃ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು ಶೇಕಡ 5 ಅಂಕಗಳನ್ನೊಳಗೊಂಡಿರುತ್ತದೆ.

3. ಸೇವಕರು ಃ ಖಾಲಿ ಇರುವ ಹುದ್ದೆಗಳು – 06.

ವೇತನ ಶ್ರೇಣಿ ಃ 9600–200–12000–250–13000–300–14200–350–14550.

## ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಮಹಿಳೆ | ಗ್ರಾಮೀಣ | ಅಂಗವಿಕಲ ಅಭ್ಯರ್ಥಿ | ಕ.ಮಾ.ಅ. | ಒಟ್ಟು ಹುದ್ದೆಗಳು |
|---|---|---|---|---|---|
| ಪರಿಶಿಷ್ಟ ಜಾತಿ | - | - | - | 01 | 01 |
| ಪ್ರವರ್ಗ - 2 (ಎ) | - | 01 | | | 01 |
| ಪ್ರವರ್ಗ - 2(ಬಿ) | | - | 01* | | 01 |
| ಸಾಮಾನ್ಯ | 01 | 01 | 01** | | 02 |
| ಒಟ್ಟು | 01 | 02 | 02 | 01 | 06 |

* ಈ ಹುದ್ದೆಯು ಅಂಧ ಃ ದೃಷ್ಟಿಮಾಂಧ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ.

** ಈ ಹುದ್ದೆಯು ಶ್ರವಣದೋಷವುಳ್ಳ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ.

ವಿದ್ಯಾರ್ಹತೆಃ 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನಃ ಕರ್ನಾಟಕ ಅಧೀನ ನ್ಯಾಯಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ರನ್ವಯ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿಃ ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

ಮಹಿಳಾ ಅಭ್ಯರ್ಥಿಗಳ ಮೀಸಲಾತಿಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಕೋಲಾರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

## ವಯೋಮಿತಿಃ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ – 1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

<u>ವಯೋಮಿತಿ ಸಡಲಿಕೆ :</u> ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯವರಿಗೆ, ಮಾಜಿಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

<u>ನಿಗದಿತ ಅರ್ಜಿ ಶುಲ್ಕ: ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:</u>

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2ಎ, 2ಬಿ, 3ಎ, 3ಬಿ, | ರೂ.200-00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ – 1, ಅಂಗವಿಕಲ ಅಭ್ಯರ್ಥಿಗಳಿಗೆ | ರೂ.100-00 |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ http://karnatakajudiciary.kar.nic.in/districtrecruitment.asp **or** http://districts.ecourts.gov.in/kolar ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking/credit card/debit card/ challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **print out** ಅನ್ನು ಪಡೆದುಕೊಂಡು ಎಸ್‌ಬಿಐ ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

<u>ಪರಿವೀಕ್ಷಣಾ ಅವಧಿ:</u>

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ನಿಯಮಗಳಂತೆ ಹುದ್ದೆಗಳಿಗೆ ನಿಗದಿ ಪಡಿಸಿರುವ ಇಲಾಖಾ ಪರೀಕ್ಷೆಗಳು, ಕನ್ನಡ ಭಾಷಾ ಪರೀಕ್ಷೆ ಹಾಗೂ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

**ಪಿಂಚಣಿ ಸೌಲಭ್ಯ:**

ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿಃ(ಎಸ್‌ಪಿಎಲ್)**/04/p/e/t/2005. Dt:31-03-2006** ರಂತೆ ಅನ್ವಯಿಸುವುದು.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:

1. ಅಭ್ಯರ್ಥಿಗಳು ಅರ್ಜಿಯನ್ನು **online** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ 5 **cm** ಉದ್ದ **x 3.6 cm** ಅಗಲವುಳ್ಳದಾಗಿರಬೇಕು ಮತ್ತು **50kb** ಅಳತೆಯದ್ದಾಗಿರಬೇಕು ಹಾಗೂ ಅದು **jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

   ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5cm** ಉದ್ದ **X 7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26kb** ಅಳತೆಯದ್ದಾಗಿರಬೇಕು ಹಾಗೂ **jpg** ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು **online** ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಸಂದರ್ಶನದ / ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.

7. ಈ ವೈಬ್‌ಸೈಟ್ **http://karnatakajudiciary.kar.nic.in/districtrecruitment.asp** - **or http://districts.ecourts.gov.in/kolar** ನಲ್ಲಿ ಕೊನೆಯ ದಿನಾಂಕ 08-02-2018 ರಾತ್ರಿ 11 ಃ 59 ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅ) ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ ಃ 09-02-2018 ಕೊನೆಯ ದಿನಾಂಕವಾಗಿದ್ದು, ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಸಂದರ್ಶನದ ವೇಳಾಪಟ್ಟಿಯನ್ನು ಈ ವೈಬ್‌ಸೈಟ್ **http://karnatakajudiciary.kar.nic/districtrecruitment.asp or http://districts.ecourts.gov.in/kolar** ನಲ್ಲಿ ಪ್ರಕಟಿಸಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ

ಪ್ರಕಟಿಸಲಾಗುವುದು. ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.

9. ಅರ್ಹ ಅಭ್ಯರ್ಥಿಗಳಿಗೆ ಎಸ್‌ಎಂಎಸ್ ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಒಂದು ವೇಳೆ ಎಸ್‌ಎಂಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ. ಅರ್ಹ ಅಭ್ಯರ್ಥಿಗಳು **http://karnatakajudiciary.kar.nic/districtrecruitment.asp or** **http://districts.ecourts.gov.in/kolar** ವೆಬ್‌ಸೈಟ್‌ನಿಂದ ಸಂದರ್ಶನದ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ವೋಟರ್ ಐಡಿ / ಆಧಾರ್‌ಕಾರ್ಡ್ / ಡ್ರೈವಿಂಗ್ ಲೈಸೆನ್ಸ್ / ಪ್ಯಾನ್‌ಕಾರ್ಡ್ / ಪಾಸ್‌ಪೋರ್ಟ್) ಸಂದರ್ಶನಕ್ಕೆ ಹಾಜರಾಗತಕ್ಕದ್ದು.

## 10. ಇತರೆ ಸೂಚನೆಗಳುಃ

1) ಅಭ್ಯರ್ಥಿಗಳು ಸಂದರ್ಶನದ / ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದುಃ

   ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.

   ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ.

   ಇ) ಎಸ್.ಎಸ್.ಎಲ್.ಸಿ ಅಂಕಪಟ್ಟಿ ಹಾಗೂ ಆಯಾ ಹುದ್ದೆಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.

   ಈ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್‌ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

ಉ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕಃ 19-11-2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆಃ ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ / ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ.

ಊ) ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ.

ಋ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.

ಎ) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿಯೇ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರುವ ನಿರಾಪೇಕ್ಷಣಾ ಪ್ರಮಾಣಪತ್ರ.

ಏ) ಮೇಲ್ಕಂಡ ಹುದ್ದೆಗಳಿಗೆ ನಿಗಧಿಪಡಿಸಿರುವ ಇತರೆ ಅವಶ್ಯಕ ದಾಖಲಾತಿಗಳು.

2) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

3) ಸಂದರ್ಶನಕ್ಕೆ / ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

4) ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

ಸಹಿ/-

(ಐ.ಎಫ್. ಬಿದರಿ )

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಕೋಲಾರ.

<u>ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆಃ</u>

ವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,,
ಬೆಂಗಳೂರು – 560 001.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಲಘುವ್ಯಾಜ್ಯಗಳ ನ್ಯಾಯಾಲಯಗಳು ಬೆಂಗಳೂರು, ಚಿಕ್ಕಬಳ್ಳಾಪುರ, ತುಮಕೂರು, ಮಂಡ್ಯ, ರಾಮನಗರ, ಮೈಸೂರು, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲಬುರ್ಗಿ, ಹಾಸನ, ಹಾವೇರಿ, ಕೊಡಗು, ಮಂಗಳೂರು, ಉಡುಪಿ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ರಾಯಚೂರು, ಬೀದರ್, ವಿಜಯಪುರ, ಯಾದಗಿರಿ, ಕೊಪ್ಪಳ, ಚಾಮರಾಜನಗರ, ಶಿವಮೊಗ್ಗ ಮತ್ತು ಕಾರವಾರ ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

1. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ, ಕೋಲಾರ.
2. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕೋಲಾರ.
3. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ, ಕೆ.ಜಿ.ಎಫ್,
4. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕೆ.ಜಿ.ಎಫ್.
5. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಮುಳಬಾಗಿಲು,
6. ಹಿರಿಯ ಸಿವಿಲ್ ನ್ಯಾಯಾಧೀಶರು ಸಂಚಾರಿ ನ್ಯಾಯಾಲಯ, ಮುಳಬಾಗಿಲು.
7. ಹಿರಿಯ ಸಿವಿಲ್ ನ್ಯಾಯಾಧೀಶರು ಸಂಚಾರಿ ನ್ಯಾಯಾಲಯ, ಮಾಲೂರು
8. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಮಾಲೂರು.
9. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಶ್ರೀನಿವಾಸಪುರ,
10. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಬಂಗಾರುಪೇಟೆ.

ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

11. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು – ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ,
12. ಆಯುಕ್ತರು ವಾರ್ತಾ ಇಲಾಖೆ, ನಂಃ 17, ಭಗವಾನ್ ಮಹಾವೀರ (ಇನ್‌ಫಂಟ್ರಿ) ಜೈನ್ ರಸ್ತೆ, ಬೆಂಗಳೂರು – 560 001 ಇವರಿಗೆ ಪ್ರಾದೇಶಿಕೆ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಸಾರಕ್ಕಾಗಿ ಪ್ರಕಟಿಸಲು ಕೋರಿ.
13. ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೋಲಾರ.
14. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ,
15. ಕಛೇರಿ ಪ್ರತಿ.